ಅ) ಉದ್ಭವಿಸುವುದಿಲ್ಲ.

ಇ) ಈ ಹಿಂದೆ ವಿಭಜನೆಗೊಂಡ ಉಡುಪಿ ವಲಯದಲ್ಲಿ ಕೆಲಸದ ಒತ್ತಡ ಜಾಸ್ತಿ ಇತ್ತು.

ರಾಜ್ಯದ ಮಲೆನಾಡು ಕಡೆಗಳಲ್ಲಿ ಶಿಕ್ಷಕರ ಕೊರತೆ

1942 (2603) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದ ಮಲೆನಾಡು ಕಡೆಗಳಲ್ಲಿ ಪದವಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಉಡುಪಿ ಜಿಲ್ಲೆಯ ಬೈಂದೂರು ಕ್ಷೇತ್ರದಲ್ಲಿ ಪದವಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಎಲ್ಲೆಲ್ಲಿ ಶಿಕ್ಷಕರ ಕೊರತೆಯಿದೆ; (ವಿವರ ನೀಡಿ)

ಇ) ವಿದ್ಯಾರ್ಥಿಗಳಿಗೆ ಇದರಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಶಿಕ್ಷಕರ ಕೊರತೆಯನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು?

ಡಾ: ಜಿ.ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಅನುಬಂಧದಲ್ಲಿ ನೀಡಲಾಗಿದೆ.

ಇ) ಬಂದಿದೆ.

ಈ) ಪದವಿ ಕಾಲೇಜುಗಳಿಗೆ ಸಂಬಂಧಿಸಿದಂತೆ ಹೆಚ್ಚುವರಿ ಕಾರ್ಯಭಾರದಿದ್ದಲ್ಲಿ ತರಗತಿಗಳನ್ನು ನಿರ್ವಹಿಸಲು ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಲು ಸರ್ಕಾರ ಅನುಮತಿ ನೀಡಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದಿಲ್ಲ.

ಪದವಿ ಪೂರ್ವ ಕಾಲೇಜುಗಳಿಗೆ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ತುಂಬಲು ನೇರ ನೇಮಕಾತಿಗೆ ಪ್ರಸ್ತಾವನೆಯನ್ನು ಸ್ವೀಕರಿಸಿದ್ದು ಮುಂದಿನ ಕ್ರಮ ಜರುಗಿಸಲಾಗುತ್ತಿದೆ ಹಾಗೂ ಬಡ್ತಿ ಮೂಲಕ ಹುದ್ದೆಗಳನ್ನು ತುಂಬಲು ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಜರುಗಿಸಲಾಗುತ್ತಿದೆ.

ಅನುಬಂಧ

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬೈಂದೂರು
ಇಲ್ಲಿರುವ ಉಪನ್ಯಾಸಕರ ಕೊರತೆ ವಿವರ:

1. ರಾಜ್ಯಶಾಸ್ತ್ರ	- 01
2. ವಾಣಿಜ್ಯಶಾಸ್ತ್ರ	- 01

: - :

ಬೈಂದೂರು ಕ್ಷೇತ್ರದ ಸರ್ಕಾರಿ ಪದವಿ ಪೂರ್ವ
ಕಾಲೇಜುಗಳಲ್ಲಿ ಶಿಕ್ಷಕರ ಕೊರತೆ ವಿವರ:

ಬೈಂದೂರು	ನಾವುಂದ	ವಂಡ್ಸೆ	ಉಪ್ಪುಂದ	ಕಂಬದ ಕೋಣೆ
ಇತಿಹಾಸ	ಇತಿಹಾಸ	ಇಂಗ್ಲಿಷ್	ಕನ್ನಡ	-
ಅರ್ಥಶಾಸ್ತ್ರ	ಜೀವಶಾಸ್ತ್ರ	ವಾಣಿಜ್ಯ	ಇಂಗ್ಲಿಷ್	-
ಸಮಾಜಶಾಸ್ತ್ರ	-	-	ಇತಿಹಾಸ	-
-	-	-	ಸಮಾಜಶಾಸ್ತ್ರ	-

ಬೈಂದೂರು ಕ್ಷೇತ್ರದಲ್ಲಿ ಪ್ರೌಢಶಾಲೆಗಳ ಮಂಜೂರಾತಿ

1943 (2604) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಉಡುಪಿ ಜಿಲ್ಲೆಯ ಬೈಂದೂರು ವಿಧಾನಸಭಾ ಕ್ಷೇತ್ರದಲ್ಲಿ ವಿದ್ಯಾರ್ಥಿಗಳ ಸಂಖ್ಯೆಗಳಿಗನುಗುಣವಾಗಿ ಪ್ರೌಢಶಾಲೆಯನ್ನು ತೆರೆಯುವ ಅಗತ್ಯವಿದ್ದು ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗುವುದೆ;

ಆ) ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?